





**ಸುದ್ದಿ ಸಂಚಯ**

# ಮೈಸೂರು ಶ್ರೀರಾಮಕೃಷ್ಣ ಆಶ್ರಮದ ನೇತೃತ್ವದಲ್ಲಿ ''ಸ್ವಚ್ಛ ಮೈಸೂರು ಸ್ವಸ್ಥ ಜೀವನ'' ಅಭಿಯಾನ

ಮೈಸೂರು ಶ್ರೀರಾಮಕೃಷ್ಣ ಆಶ್ರಮವು ಹಮ್ಮಿಕೊಂಡಿರುವ ''ಸ್ವಚ್ಛ ಮೈಸೂರು ಸ್ವಸ್ಥ ಜೀವನ'' ಎಂಬ ಸ್ವಚ್ಛತಾ ಅಭಿಯಾನ ಮತ್ತು ಜನ ಜಾಗೃತಿ ಕಾರ್ಯಕ್ರಮದ ಉದ್ಘಾಟನೆಯು ೨೦೧೭ರ ಜನವರಿ ೨೯ರಂದು ಬೆಳಿಗ್ಗೆ ಮಂಜುನಾಥಪುರ ಆಂಜನೇಯಸ್ವಾಮಿ ದೇವಸ್ಥಾನದ ಮುಂಭಾಗದಲ್ಲಿ ನಡೆಯಿತು. ಆಶ್ರಮದ ಯತಿಗಳ ಶಾಂತಿ ಮಂತ್ರ ಪಠಣದೊಂದಿಗೆ ಪ್ರಾರಂಭವಾದ ಕಾರ್ಯಕ್ರಮದ ಉದ್ಘಾಟನೆಯನ್ನು ಮೈಸೂರು ಮಹಾನಗರಪಾಲಿಕೆಯ ಮಹಾಪೌರರಾದ ಶ್ರೀ ಎಂ. ಜೆ. ರವಿಕುಮಾರ್ ಅವರು ಸಸಿಗಳಿಗೆ ನೀರೆರೆಯುವ ಮೂಲಕ ನೆರವೇರಿಸಿಕೊಟ್ಟರು. ಆಶ್ರಮದ ಅಧ್ಯಕ್ಷರಾದ ಸ್ವಾಮಿ ಆತ್ಮಜ್ಞಾನಂದಜಿ ಮಹಾರಾಜ್‌ರವರು ಸ್ವಾಗತ ಮತ್ತು ಪ್ರಾಸ್ತಾವಿಕ ಭಾಷಣವನ್ನು ಮಾಡಿ, ಸ್ವಚ್ಛತೆ ಎಂಬುದು ವೈಯಕ್ತಿಕ ಜವಾಬ್ದಾರಿ ಎನ್ನುತ್ತಾ ಸ್ವಚ್ಛತಾ ಪ್ರತಿಜ್ಞೆಯನ್ನು ಮಾಡಿಸಿದರು. ಈ ಕಾರ್ಯಕ್ರಮದ ಮುಖ್ಯ ಅತಿಥಿಗಳಾಗಿದ್ದ ಮಾಜಿ ವಿಧಾನಪರಿಷತ್ ಸದಸ್ಯರಾದ ಶ್ರೀ ಡಿ. ಮಾದೇಗೌಡರು, ವಿಶೇಷ ಆಹ್ವಾನಿತರಾಗಿ ಆಗಮಿಸಿದ ಮೈಸೂರು ಮಹಾನಗರಪಾಲಿಕೆಯ ಆಯುಕ್ತರಾದ ಶ್ರೀ ಜಿ. ಜಗದೀಶ್‌ರವರು ಭಾಗವಹಿಸಿ ಮಾತನಾಡಿ, ''ಸ್ವಚ್ಛ ಮೈಸೂರು ಸಂಪೂರ್ಣ ಸ್ವಚ್ಛ ಮೈಸೂರು ಎಂದಾಗಲು ನಾವೆಲ್ಲಾ ಜವಾಬ್ದಾರಿಯಿಂದ ಶ್ರಮಿಸಬೇಕು'' ಎಂದರು. ನಗರಸಭಾ ಸದಸ್ಯರಾದ ಶ್ರೀಮತಿ ಅನುಸೂಯ ಅವರು ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು. ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಿಧಾನಸಭಾ ಸದಸ್ಯರಾದ ಶ್ರೀ ವಾಸು ಅವರು ವಹಿಸಿದ್ದರು. ಆಶ್ರಮದ ಹಿರಿಯ ಯತಿಗಳಾದ ಪೂಜ್ಯ ಸ್ವಾಮಿ ನಿತ್ಯಸ್ಥಾನಂದಜಿ ಮಹಾರಾಜ್‌ರವರು ಆಶೀರ್ವಚನ ನೀಡುತ್ತಾ , ಮೂಲಕ ''ಮೈಸೂರು ಗಲೀಜು, ಗಲಾಟೆಗಳಿಗೆ ಅಪವಾದವಾದ ನಗರ'' ಎಂದರು. ಕಾರ್ಯಕ್ರಮದ ವಂದನಾರ್ಪಣೆಯನ್ನು ಪ್ರೊ. ಕೆ.ಎಸ್. ನಾಗಪತಿಯವರು ನೆರವೇರಿಸಿ ಕೊಟ್ಟರು.

ಸಮಾರಂಭದಲ್ಲಿ ವಿವಿಧ ಶಾಲೆಗಳ ವಿದ್ಯಾರ್ಥಿಗಳು, ಆಶ್ರಮದ ಸ್ವಯಂಸೇವಕರು, ಭಕ್ತರೂ ಸೇರಿದಂತೆ ಸುಮಾರು ೪೦೦ ಜನರು ಭಾಗವಹಿಸಿದ್ದರು. ಬಳಿಕ ಮಂಜುನಾಥಪುರದ ವಿವಿಧ ಏಳು ಬಡಾವಣೆಗಳಲ್ಲಿ ಸ್ವಚ್ಛತಾ ಕಾರ್ಯವನ್ನು ಕೈಗೊಳ್ಳಲಾಯಿತು. ಈ ಅಭಿಯಾನವು ಆಶ್ರಮದ ಮಾರ್ಗದರ್ಶನದಲ್ಲಿ ಸತತ ೪೦ ವಾರಗಳ ಕಾಲ, ನಗರದ ವಿವಿಧ ಬಡಾವಣೆಗಳಲ್ಲಿ ಮುಂದುವರಿಯಲಿದೆ.







# ಮೈಸೂರು ಆಶ್ರಮದಲ್ಲಿ 'ವಿವೇಕ ಶಿಕ್ಷಣ'ದ ೧೭ನೇ ವಾರ್ಷಿಕೋತ್ಸವ

ಮೈಸೂರು ಶ್ರೀರಾಮಕೃಷ್ಣ ಆಶ್ರಮವು ಕಳೆದ ೧೭ ವರ್ಷಗಳಿಂದ ನಡೆಸುತ್ತಿರುವ **'ವಿವೇಕ ಶಿಕ್ಷಣ'** ಉಚಿತ ಶಿಕ್ಷಣ ತರಬೇತಿ ಕಾರ್ಯಕ್ರಮದ **ವಾರ್ಷಿಕೋತ್ಸವ ಸಮಾರಂಭವ**ನ್ನು ಜನವರಿ ೨೧, ಶನಿವಾರದಂದು ಆಶ್ರಮದ ಸಭಾಂಗಣದಲ್ಲಿ ಆಯೋಜಿಸಲಾಗಿತ್ತು. ಈ ಕಾರ್ಯಕ್ರಮದಲ್ಲಿ ಆಶ್ರಮದ ಅಧ್ಯಕ್ಷರಾದ ಪೂಜ್ಯ ಸ್ವಾಮಿ ಆತ್ಮಜ್ಞಾನಂದಜಿ, ಪೂಜ್ಯ ಸ್ವಾಮಿ ನಿತ್ಯಸ್ಥಾನಂದಜಿ ಹಾಗೂ ಶ್ರೀರಾಮಕೃಷ್ಣ ವಿದ್ಯಾಶಾಲೆಯ ಪ್ರಾಂಶುಪಾಲರಾದ ಶ್ರೀ ಎಸ್. ಬಾಲಾಜಿ ಪಾಲ್ಗೊಂಡಿದ್ದರು. ಅನಂತರ ವಿವೇಕ ಶಿಕ್ಷಣದ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮಗಳನ್ನೂ ಆಯೋಜಿಸಲಾಗಿತ್ತು. ಭಕ್ತಿಗೀತೆ, ಜಾನಪದ ಗೀತೆ ಹಾಗೂ ದೇಶಭಕ್ತಿ ಗೀತೆಗಳ ಸಮೂಹ ನೃತ್ಯ ಇವುಗಳ ನಂತರ, **'ಕಿತ್ತೂರಿನ ವೀರಮಹಿಳೆ – ರಾಣಿ ಚೆನ್ನಮ್ಮ'** ಎಂಬ ನಾಟಕವನ್ನು ವಿದ್ಯಾರ್ಥಿಗಳು ಬಹಳ ಆಕರ್ಷಕವಾಗಿ ಪ್ರದರ್ಶಿಸಿದರು.

ಆರ್ಥಿಕವಾಗಿ ಹಾಗೂ ಶೈಕ್ಷಣಿಕವಾಗಿ ಹಿಂದುಳಿದಿರುವ ವಿದ್ಯಾರ್ಥಿಗಳಿಗೆ ನೀಡಲಾಗುತ್ತಿರುವ ಈ ಶೈಕ್ಷಣಿಕ ತರಬೇತಿಯಿಂದ ಇಲ್ಲಿಯವರೆಗೆ ೫೦೦೦ಕ್ಕೂ ಹೆಚ್ಚು ವಿದ್ಯಾರ್ಥಿಗಳು ಪ್ರಯೋಜನ ಪಡೆದಿರುತ್ತಾರೆ. ವಿಶೇಷವಾಗಿ ಹಲವಾರು ಸರಕಾರಿ ಶಾಲೆಗಳಲ್ಲಿ ಕಲಿಯುತ್ತಿರುವ ಕನ್ನಡ ಮಾಧ್ಯಮದ ೯ ಹಾಗೂ ೧೦ನೆಯ ತರಗತಿಯ ವಿದ್ಯಾರ್ಥಿಗಳು ಈ ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳುತ್ತಿದ್ದಾರೆ.

Managing Editor : Swami Atmajnananda
Editor : Swami Jnanayogananda
Printed and Published by Swami Muktidananda, on behalf of Sri Ramakrishna Ashrama, Yadavagiri, Mysore and Printed at Mayur Graphics, No.C-12, Industrial Estate, Rajaji Nagar, Bangalore -560 010 and published at Sri Ramakrishna Ashrama, Yadavagiri, Mysore -570 020